ವಿಜಯ ಕರ್ನಾಟಕ

# ಧರ್ಮೋತ್ಥಾನ ಟ್ರಸ್ಟ್‌ನಿಂದ 210 ಸ್ಮಾರಕ ರಕ್ಷಣೆ

■ **ವಿಕ ಸುದ್ದಿಲೋಕ** ಧರ್ಮಸ್ಥಳ

ಪರಂಪರೆಯ ಪುನರುತ್ಥಾನದ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ವತಿಯಿಂದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಅಧ್ಯಕ್ಷತೆಯಲ್ಲಿ 1991ರಲ್ಲಿ ಸ್ಥಾಪನೆಗೊಂಡ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ಈವರೆಗೆ 210 ಐತಿಹಾಸಿಕ ಹಿನ್ನೆಲೆಯನ್ನು ಹೊಂದಿರುವ ಪುರಾತನ ಸ್ಮಾರಕಗಳ ಸಂರಕ್ಷಣ ಕಾಯಕವನ್ನು 21.02 ಕೋ. ರೂ. ವೆಚ್ಚದಲ್ಲಿ ಕೈಗೊಂಡಿವೆ.

ಧರ್ಮೋತ್ಥಾನ ಟ್ರಸ್ಟ್ ಕಾರ್ಯನಿರ್ವಹಿಸಿದ ಪ್ರಾರಂಭದ ಹತ್ತು ವರ್ಷಗಳಲ್ಲಿ ರಾಜ್ಯದಲ್ಲಿ ಈ ಟ್ರಸ್ಟ್ ವತಿಯಿಂದ ನಡೆದ ಸ್ಮಾರಕ ಸಂರಕ್ಷಣಾ ಕಾರ್ಯವನ್ನು ಗಮನಿಸಿದ ಕರ್ನಾಟಕ ಸರಕಾರವು ಈ ಟ್ರಸ್ಟ್‌ನ್ನು ಸರಕಾರದ ಸಹಭಾಗಿತ್ವದ ಸಾರ್ವಜನಿಕ ಸಂಸ್ಥೆ ಯೆಂದು ಗುರುತಿಸಿಕೊಂಡು ವಾರ್ಷಿಕ ಕ್ರಿಯಾ ಯೋಜನೆಗೆ ಮಂಜೂರಾತಿ ಪಡೆ ಯಿತು. ಕಳೆದ 14 ವರ್ಷಗಳಲ್ಲಿ ಕರ್ನಾಟಕ ಸರಕಾರದ ಸಹಭಾಗಿತ್ವದೊಂದಿಗೆ ಧರ್ಮೋತ್ಥಾನ ಟ್ರಸ್ಟ್ ವತಿಯಿಂದ ರಾಜ್ಯದ 25 ಜಿಲ್ಲೆಗಳ ವ್ಯಾಪ್ತಿಯಲ್ಲಿ 144 ಪುರಾತನ ದೇವಾಲಯಗಳ ಜೀರ್ಣೋದ್ಧಾರ ಕಾರ್ಯ ಕೈಗೊಳ್ಳಲಾಗಿದೆ.

ಧರ್ಮೋತ್ಥಾನ ಟ್ರಸ್ಟ್‌ನ ಕಾರ್ಯಕ್ಷೇತ್ರ ವನ್ನು ಗಮನಿಸಿದ ಸರಕಾರೇತರ ಸಾರ್ವಜನಿಕ ಸಂಸ್ಥೆಯಾದ ಜೆ.ಎಸ್.ಡಬ್ಲ್ಯು ಪ್ರತಿಷ್ಠಾನವು ಬಳ್ಳಾರಿ ಜಿಲ್ಲೆಯ ವ್ಯಾಪ್ತಿಯಲ್ಲಿ ಎರಡು ಪುರಾತನ ಸ್ಮಾರಕಗಳ ಸಂರಕ್ಷಣಾ ಕಾರ್ಯಕ್ರಮ ಟ್ರಸ್ಟಿನ ಸಹಭಾಗಿತ್ವ ಪಡೆದಿದೆ. ಮಾತ್ರವಲ್ಲದೆ ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಪೆನುಗೊಂಡದಲ್ಲಿರುವ ಒಂದು ಸ್ಮಾರಕ ಸಂರಕ್ಷಣ ಕಾರ್ಯ ಕೈಗೊಂಡು ನೆರೆ ರಾಜ್ಯದಲ್ಲಿಯೂ ತನ್ನ ಕಾರ್ಯಕ್ಷೇತ್ರದ ವ್ಯಾಪ್ತಿ ವಿಸ್ತರಿಸಿಕೊಂಡಿದೆ.

ಶಿಥಿಲಗೊಂಡಿರುವ ದೇವಾಲಯಗಳ ಪುನರ್ ನಿರ್ಮಾಣವಾಗಬೇಕಾಗಿರುವುದರಿಂದ ಧರ್ಮೋತ್ಥಾನ ಟ್ರಸ್ಟ್ ವತಿಯಿಂದ ನಡೆಯುವ ಜೀರ್ಣೋದ್ಧಾರ ಕಾರ್ಯವನ್ನು ಪುರಾತತ್ವ ಇಲಾಖೆ ಅಧಿಕೃತ ಸಂರಕ್ಷಣಾ ಕೈಪಿಡಿಯಲ್ಲಿ ನಮೂದಿಸಿದ ನಿಯಮಾವಳಿಗನುಗುಣವಾಗಿ ಮತ್ತು ವಿಧಾನಗಳಂತೆ ನಿರ್ವಹಿಸಲು ಹಿರಿಯ ತಜ್ಞರನ್ನೊಳಗೊಂಡ ಪ್ರತ್ಯೇಕ ಸಲಹಾ ಸಮಿತಿಯ ಮಾರ್ಗದರ್ಶನದಲ್ಲಿ ಕೆಲಸ ನಿರ್ವಹಿಸಲಾಗುತ್ತಿದೆ.



## ಟ್ರಸ್ಟ್ ಸಲಹಾ ಸಮಿತಿ ಸದಸ್ಯರ ಸಭೆ

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್‌ನ ಸಲಹಾ ಸಮಿತಿ ಸದಸ್ಯರ ಸಭೆ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ಶುಕ್ರವಾರ ನಡೆಯಿತು.

ಸಭೆಯಲ್ಲಿ ಧರ್ಮೋತ್ಥಾನ ಟ್ರಸ್ಟ್‌ನ ಕಾರ್ಯಕ್ಷೇತ್ರದ ವಿವರಗಳನ್ನು ಅವಲೋಕಿಸಿ, ಜೀರ್ಣೋದ್ಧಾರಗೊಂಡಿರುವ ಸ್ಮಾರಕಗಳಲ್ಲಿ ನಡೆಯುತ್ತಿರುವ ಧಾರ್ಮಿಕ ಕಾರ್ಯಗಳು ಹಾಗೂ ಕಟ್ಟಡ ನಿರ್ವಹಣೆಯ ನಿಟ್ಟಿನಲ್ಲಿ ಸ್ಥಳೀಯರನ್ನು ಸಕ್ರಿಯ ವಾಗಿ ಅಳವಡಿಸಿಕೊಳ್ಳುವ ಬಗ್ಗೆ ಸದಸ್ಯರಿಂದ ಸಲಹೆಗಳನ್ನು ಪಡೆಯಲಾಯಿತು.

ಕರ್ನಾಟಕ ಸರಕಾರ ನಿವೃತ್ತ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಡಾ. ಸಿ.ಎಸ್. ಕೇದಾರ್, ಇತಿಹಾಸ ತಜ್ಞೆ ಡಾ. ಚೂಡಾಮಣಿ ನಂದಗೋಪಾಲ್, ಲೋಕೋಪಯೋಗಿ ಇಲಾಖೆಯ ನಿವೃತ್ತ ಕಾರ್ಯದರ್ಶಿ ಡಾ. ಜಿ. ಅಶ್ವತನಾರಾಯಣ, ಹಿರಿಯ ಸಾಹಿತಿ ಡಾ. ನಾಡೋಜ ಹಂ.ಪ. ನಾಗರಾಜಯ್ಯ, ಪತ್ರಕರ್ತ ವಿಶ್ವೇಶ್ವರ ಭಟ್, ಭಾರತೀಯ ಪುರಾತತ್ವ ಸರ್ವೇಕ್ಷಣಾಲಯ ನಿವೃತ್ತ ನಿರ್ದೇಶಕ ಡಾ. ಎ.ಎಸ್. ಹಲಕಟ್ಟಿ, ಮೈಸೂರು ವಿಶ್ವವಿದ್ಯಾಲಯ ನಿವೃತ್ತ ಪ್ರಾಧ್ಯಾಪಕ ಡಾ. ಎನ್.ಎಸ್. ರಂಗರಾಜು, ಅವಧಾನ ಕಲಾಪ್ರವೀಣ ಡಾ. ಶತಾವಧಾನಿ ಆರ್. ಗಣೇಶ್ ಉಪಸ್ಥಿತರಿದ್ದರು.

ಟ್ರಸ್ಟ್‌ನ ನಿರ್ದೇಶಕ ಹರಿರಾಮ ಶೆಟ್ಟಿ ಸ್ವಾಗತಿಸಿದರು. ಕಾರ್ಯದರ್ಶಿ ಎ.ವಿ. ಶೆಟ್ಟಿ ಟ್ರಸ್ಟ್‌ನ ಪ್ರಗತಿಯ ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.